ಕೊಪ್ಪಳದಲ್ಲಿ ಪಶು ವಿಶ್ವವಿದ್ಯಾನಿಲಯ ಪ್ರಾರಂಭ

1108 (1504) ಶ್ರೀ ಕರಡಿ ಸಂಗಣ್ಣ ಅಮರಪ್ಪ (ಕೊಪ್ಪಳ) ಮಾನ್ಯ ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಪಶು ವಿಶ್ವವಿದ್ಯಾನಿಲಯ ಸ್ಥಾಪಿಸುವ ಪ್ರಸ್ತಾವನೆಯು ಸರ್ಕಾರದ ಮುಂದೆ ಇದೆಯೇ ; ಈ ಬಗ್ಗೆ ತಜ್ಞರ ಅಭಿಪ್ರಾಯ ಕೇಳಲಾಗಿದೆಯೇ ?

ಆ) ಕೊಪ್ಪಳ ಕ್ಷೇತ್ರದ ಮುನಿರಾಬಾದ್ ಫಾರಂನಲ್ಲಿ ವಿಶ್ವವಿದ್ಯಾನಿಲಯ ಪ್ರಾರಂಭಿಸಲು ಸರ್ಕಾರಕ್ಕೆ ಆಲೋಚನೆ ಇದೆಯೇ ; ಇದ್ದರೆ, ಯಾವಾಗ ಪ್ರಾರಂಭಿಸಲಾಗುವುದು ?

ಶ್ರೀ ಎಂ. ಮಹದೇವ್ (ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು) :

ಅ) -- ಇದೇ --,

ತಜ್ಞರ ಅಭಿಪ್ರಾಯ ಪಡೆಯಲಾಗಿದೆ.

ಆ) ವಿಶ್ವವಿದ್ಯಾನಿಲಯವನ್ನು ಪ್ರಾರಂಭಿಸುವ ಬಗ್ಗೆ ಅಥವಾ ಸ್ಥಳದ ಬಗ್ಗೆ ನಿರ್ಧಾರ ಕೈಗೊಂಡಿಲ್ಲ.

ಕೊಪ್ಪಳ ಜಿಲ್ಲೆಯಲ್ಲಿ ಕೈಮಗ್ಗ ಜಿಲ್ಲಾ ಮಟ್ಟದ ಕಛೇರಿ ಪ್ರಾರಂಭ

1109 (1505) ಶ್ರೀ ಕರಡಿ ಸಂಗಣ್ಣ ಅಮರಪ್ಪ (ಕೊಪ್ಪಳ) ಮಾನ್ಯ ರೇಷ್ಮೆ ಮತ್ತು ಜವಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಕೊಪ್ಪಳ ಜಿಲ್ಲೆಯಲ್ಲಿ ನೇಕಾರರು ಹೆಚ್ಚಿನ ಸಂಖ್ಯೆಯಲ್ಲಿದ್ದು, ಸಣ್ಣ ಉದ್ದಿಮೆಯನ್ನು ಅವಲಂಬಿಸಿರುವುದರಿಂದ, ಇವರುಗಳ ಅನುಕೂಲಕ್ಕಾಗಿ ಜಿಲ್ಲಾ ಮಟ್ಟದ ಕೈಮಗ್ಗದ ಕಛೇರಿಯನ್ನು ಸ್ಥಾಪಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ ?

ಆ) ಇದ್ದರೆ ಯಾವಾಗ ಪ್ರಾರಂಭಿಸಲಾಗುತ್ತದೆ ?

ಶ್ರೀ ಹೆಚ್.ಎಂ. ರೇವಣ್ಣ (ರೇಷ್ಮೆ ಮತ್ತು ಜವಳಿ ಸಚಿವರು) :

ಅ) ಕೈಮಗ್ಗ ಮತ್ತು ಜವಳಿ ಇಲಾಖೆಯು ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯಿಂದ ಬೇರ್ಪಟ್ಟ ನಂತರ ಎಲ್ಲಾ ಜಿಲ್ಲೆಯಲ್ಲಿ ಕೂಡ ಕೈಮಗ್ಗ ಮತ್ತು ಜವಳಿ ಇಲಾಖೆಯ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ ಜವಳಿ ಇಲಾಖೆಯನ್ನು ಪುನರ್ ರಚಿಸುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದ್ದು, ಇದರಲ್ಲಿ ಕೊಪ್ಪಳ ಜಿಲ್ಲೆಗೆ ಅಧಿಕಾರಿಗಳನ್ನು ನೇಮಿಸುವ ವಿಚಾರವೂ ಇದೆ.

ಆ) ಈ ವಿಷಯವು ಸರ್ಕಾರದ ಪರಿಶೀಲನೆಯಲ್ಲಿ ಇರುತ್ತದೆ.

ಕೊಪ್ಪಳದಲ್ಲಿ ಕೆ.ಐ.ಎ.ಡಿ.ಬಿ. ವತಿಯಿಂದ ಕೈಗಾರಿಕಾ ವಸಾಹತು ನಿರ್ಮಾಣ

1110 (1506) ಶ್ರೀ ಕರಡಿ ಸಂಗಣ್ಣ ಅಮರಪ್ಪ (ಕೊಪ್ಪಳ) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಕೊಪ್ಪಳದಲ್ಲಿ ಕೆಐಎಡಿಬಿ ವತಿಯಿಂದ ಕೈಗಾರಿಕಾ ವಸಾಹತನ್ನು ನಿರ್ಮಾಣ ಮಾಡುವ ಪ್ರಸ್ತಾವನೆಯು ಸರ್ಕಾರದ ಮುಂದೆ ಇದೆಯೇ, ಹಾಗಿದ್ದರೆ, ಯಾವಾಗ ಪ್ರಾರಂಭಿಸಲಾಗುತ್ತದೆ ?

ಆ) ಕೊಪ್ಪಳ ಜಿಲ್ಲೆಯಲ್ಲಿ ಹೊಸದಾಗಿ ಯಾವ ಯಾವ ಕೈಗಾರಿಕೆಗಳನ್ನು ಮಂಜೂರು ಮಾಡಲಾಗಿದೆ. ಆ ಕೈಗಾರಿಕೆಗಳ ಬಂಡವಾಳ ಎಷ್ಟು ಸದರಿ ಕೈಗಾರಿಕೆಗಳಲ್ಲಿ ತಯಾರಿಸಲ್ಪಡುವ ಉತ್ಪನ್ನಗಳಾವುವು ?

ಶ್ರೀ ಆರ್.ವಿ. ದೇಶಪಾಂಡೆ (ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು) :

ಅ) ಕೊಪ್ಪಳ ತಾಲ್ಲೂಕ್ ಗಿಣಿಗೇರಾ ಮತ್ತು ಬಸಾಪುರ ಗ್ರಾಮಗಳಲ್ಲಿ ಅಂದಾಜು 104 ಎಕರೆ ಜಮೀನಿನಲ್ಲಿ ಕೈಗಾರಿಕಾ ಪ್ರದೇಶವನ್ನು ಅಭಿವೃದ್ಧಿಪಡಿಸುವ ಪ್ರಸ್ತಾವನೆ ಇರುತ್ತದೆ. ಕೆಐಎಡಿಬಿ ಕಾಯಿದೆಯಡಿ ಕಲಂ 28(4) ರನ್ವಯ ಅಧಿಸೂಚನೆ ಹೊರಡಿಸಿ ಜಮೀನನ್ನು ಭೂಸ್ವಾಧೀನ ಪಡಿಸಿಕೊಳ್ಳಲಾಗಿದೆ. ಈ ಜಮೀನಿಗೆ ಭೂಪರಿಹಾರವನ್ನು ನಿಗದಿಪಡಿಸಲು ಕೊಪ್ಪಳ ಜಿಲ್ಲಾಧಿಕಾರಿಗಳನ್ನು ಕೋರಲಾಗಿದೆ.

ಆ) ಕಳೆದ ಮೂರು ವರ್ಷಗಳಲ್ಲಿ ಅಂದರೆ ದಿನಾಂಕ: 1-1-2000 ರಿಂದ 31-12-02ರ ಅವಧಿಯಲ್ಲಿ ಒಟ್ಟು 7 ಭಾರಿ ಮತ್ತು ಮಧ್ಯಮ ಕೈಗಾರಿಕಾಗಳಿಗೆ ಮಂಜೂರಾತಿ ನೀಡಲಾಗಿದೆ. ಸದರಿ ಕೈಗಾರಿಕೆಗಳಲ್ಲಿ ಹೂಡಲಾದ ಬಂಡವಾಳ ಮತ್ತು ತಯಾರಿಸಲ್ಪಡುವ ಉತ್ಪನ್ನಗಳ ಬಗ್ಗೆ ವಿವರಗಳನ್ನು ಅನುಬಂಧದಲ್ಲಿ ಲಗತ್ತಿಸಲಾಗಿದೆ.

Replies to L.A. question No. 1506

Annexure

List of Projects Approved by Government of Karnataka, Koppal District, During last 3 years (1-1-2000 to 31-12-2002)

Sl. No.	Name of the Unit	Location	Products Manufacture	Investment (Rs. in Lakhs)
1.	Koppal Green Power Ltd, Bangalore	Marali Village, Gangavathi Tq.	12.6 MW Bio-Mass Based Power Plant	4995.00
2.	Kalyani Utilities Development, Pune	Ginigera Village, Koppal Tq	10MW Captive Power Co-Generation Power Plant	3500.00
3.	Manjunatha Bio Energies Pvt. Ltd., Karatagi, Koppal Dist.	Karatagi, Gangavathi Tq Koppal Dist	Electricity Generation Bio-Mass Based	1800.00
4.	Sri Indra Power Energies Ltd., Bangalore	Chikkjantakal Village, Gangavathi Tq	Bio-Mass Based Electricity Generation	2270.00
5.	Bhoruka Power Corporation Ltd., Bangalore	Sanapur Village, Gangavathi Tq	Electric Power Generation-Nini Hydel	2570.00
6.	Kalyani Steel Ltd., Pune	Ginigera Village, Koppal Tq.	Captive Electric Power Generation	2700.00
7.	Brindavan Beverages Pvt. Ltd, Bangalore	Koppal Tq / District	Soft Drinks and Mineral Water	4220.00